**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ:- ಕೊರೋನಾ ವೈರಸ್ ಪ್ರಕರಣಗಳ ಹಿನ್ನಲೆಯಲ್ಲಿ 18 ಜಿಲ್ಲಾ ಮಟ್ಟದ ಆಸ್ಪತ್ರೆಗಳನ್ನು ಬಲಪಡಿಸಿ ಸಮರ್ಪಕ ವೈದ್ಯಕೀಯ ಸೇವೆಗಳನ್ನು ಒದಗಿಸಲು ಅಗತ್ಯವಿರುವ ಸಿಬ್ಬಂದಿಗಳನ್ನು ತಾತ್ಕಲಿಕವಾಗ 06 ತಿಂಗಳ ಮಟ್ಟಿಗೆ ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಂಡಿರುವವರನ್ನು ಮುಂದುವರೆಸುವ ಬಗ್ಗೆ.

ಓದಲಾಗಿದೆ:- 1) ಸರ್ಕಾರದ ಆದೇಶ ಸಂಖ್ಯೆ:ಆಕುಕ 01 ಸಿ ಅಂಡ್ ಆರ್ 2020, ದಿನಾಂಕ:30.03.2020.

2) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಪತ್ರ ಸಂಖ್ಯೆ:ಮುಲೆಪಅ(ಅ)/ಅಡಿ/ಬಿಜಿಟಿ/ಪ್ರಸ್ತಾವನೆ/08/2020-21, ದಿನಾಂಕ:08.09.2020.

*****

ಪ್ರಸ್ತಾವನೆ:

ಕೊರೋನಾ ವೈರಸ್ ಪ್ರಕರಣಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಸಮರ್ಪಕವಾಗಿ ನಿಭಾಯಿಸಲು 18 ಜಿಲ್ಲೆಗಳಿಗೆ ಪ್ರತಿ ಜಿಲ್ಲೆಗೆ ತಾತ್ಕಾಲಿಕವಾಗಿ 45 (ವೈದ್ಯರು-10, ಶುಶ್ರೂಷಕರು-20, ಪ್ರಯೋಗಶಾಲಾ ತಂತ್ರಜ್ಞರು-5, ಗ್ರೂಪ್-ಡಿ-10) ಹುದ್ದೆಗಳನ್ನು ಗರಿಷ್ಠ 06 ತಿಂಗಳ ಅವಧಿಗೆ ನೇಮಕ ಮಾಡಿಕೊಳ್ಳಲು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶ ಸಂಖ್ಯೆ:ಆಕುಕ 01 ಸಿ ಅಂಡ್ ಆರ್ 2020 ದಿನಾಂಕ:30/03/2020 ರಲ್ಲಿ ಆದೇಶವಾಗಿರುತ್ತದೆ.

ಸದರಿ ಆದೇಶದಂತೆ ಗರಿಷ್ಠ 06 ತಿಂಗಳ ಅವಧಿ ಸೆಪ್ಟೆಂಬರ್-2020ರ ಕೊನೆಗೆ ಮುಗಿಯುವುದರಿಂದ 18 ಜಿಲ್ಲಾಮಟ್ಟದ ಆಸ್ಪತ್ರೆಗಳಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಗುತ್ತಿಗೆ/ಹೊರಗುತ್ತಿಗೆ ಅಡಿಯಲ್ಲಿ ಮೇಲಿನಂತೆ ಅಧಿಕಾರಿ/ಸಿಬ್ಬಂದಿಗಳನ್ನು ಸೆಪ್ಟೆಂಬರ್-2020ರ ನಂತರದಲ್ಲಿ ಮುಂದುವರೆಸಿಕೊಂಡು ಹೋಗುವ ಬಗ್ಗೆ ಆಯುಕ್ತರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರು ಮೇಲೆ ಓದಲಾದ (2)ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ

ಈ ಹಿನ್ನೆಲೆಯಲ್ಲಿ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ರವರ ಪ್ರಸ್ತಾವನೆಯಂತೆ ಕೊರೋನಾ ವೈರಸ್ ಪ್ರಕರಣಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಸಮರ್ಪಕವಾಗಿ ನಿಭಾಯಿಸಲು 18 ಜಿಲ್ಲೆಗಳಿಗೆ ಪ್ರತಿ ಜಿಲ್ಲೆಗೆ ತಾತ್ಕಾಲಿಕವಾಗಿ 45 (ವೈದ್ಯರು-10, ಶುಶ್ರೂಷಕರು-20, ಪ್ರಯೋಗಶಾಲಾ ತಂತ್ರಜ್ಞರು-5, ಗ್ರೂಪ್-ಡಿ-10) ಹುದ್ದೆಗಳನ್ನು ದಿನಾಂಕ:31.12.2020ರವರೆಗೆ ಮುಂದುವರೆಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 228 ಹೆಚ್‌ಎಸ್‌ಎಂ 2020**

**ಬೆಂಗಳೂರು, ದಿನಾಂಕ: 09 -10-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೋವಿಡ್-19ರ ಸಲುವಾಗಿ ಕೊರೋನಾ ವೈರಸ್ ಪ್ರಕರಣಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಸಮರ್ಪಕವಾಗಿ ನಿಭಾಯಿಸಲು 18 ಜಿಲ್ಲೆಗಳಿಗೆ

ಪ್ರತಿ ಜಿಲ್ಲೆಗೆ ತಾತ್ಕಾಲಿಕವಾಗಿ 45 (ವೈದ್ಯರು-10, ಶುಶ್ರೂಷಕರು-20, ಪ್ರಯೋಗಶಾಲಾ ತಂತ್ರಜ್ಞರು-5, ಗ್ರೂಪ್-ಡಿ-10) ಹುದ್ದೆಗಳನ್ನು ದಿನಾಂಕ:31.12.2020ರವರೆಗೆ ಮುಂದುವರೆಸಲು ಅನುಮತಿ ನೀಡಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 434 ವೆಚ್ಚ-5 2020, ದಿನಾಂಕ: 30/09/2020 ರಂದು ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಯ. ಶಿವಶಂಕರ್) 09/X/2020
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಸೇವೆಗಳು)

ಇವರಿಗೆ:

1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
2. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
3. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು (ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಮುಖಾಂತರ)
4. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು (ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಮುಖಾಂತರ)
5. ರಾಜ್ಯದ ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು/ಜಿಲ್ಲಾ ಶಸ್ತ್ರ ಚಿಕಿತ್ಸಕರುಗಳು (ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರ ಮುಖಾಂತರ)
6. ಮುಖ್ಯ ಆಡಳಿತಾಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು.
8. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಜಿ.ಪಂ) (ವೆಚ್ಚ-5), ವಿಧಾನ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಆ.ಕು.ಕ. ಇಲಾಖೆ, ವಿಕಾಸ ಸೌಧ., ಬೆಂಗಳೂರು
2. ಸರ್ಕಾರದ ಜಂಟಿ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕು.ಕ. ಇಲಾಖೆ, ವಿಕಾಸ ಸೌಧ, ಬೆಂಗಳೂರು.